# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 531 (616) |
| ಸದಸ್ಯರ ಹೆಸರು | ಶ್ರೀ ಬಸನಗೌಡ ಬಾದರ್ಲಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 09.03.2026 |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಸರ್ಕಾರದಿಂದ ಹೊಸ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮಂಜೂರು ಮಾಡಲು ಇರುವ ಮಾನದಂಡಗಳೇನು; | ಇಂಜಿನಿಯರಿಂಗ್ ಕಾಲೇಜು/ ಪಾಲಿಟೆಕ್ನಿಕ್ ಗಳನ್ನು ಪ್ರಾರಂಭಿಸಲು ಎಐಸಿಟಿಇ ನವದೆಹಲಿಯವರ ನಿಯಮಗಳನ್ನು ಪಾಲಿಸಬೇಕಾಗಿರುತ್ತದೆ. ಸದರಿ ಎಐಸಿಟಿಇ ಮಾರ್ಗಸೂಚಿಗಳನ್ವಯ ಪಾಲಿಟೆಕ್ನಿಕ್‌ಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ನಿಯಮಾನಸಾರ ಅವಶ್ಯವಿರುವ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಒದಗಿಸಿಕೊಂಡು ಎಐಸಿಟಿಇ, ನವದೆಹಲಿಯವರಿಂದ ಅನುಮೋದನೆ ಪಡೆದು ಪ್ರಾರಂಭಿಸಬೇಕಾಗಿರುತ್ತದೆ.<br><br>ಎಐಸಿಟಿಇ ಪರಿಷ್ಕೃತ ಮಾರ್ಗಸೂಚಿಗಳನ್ವಯ, ಇಂಜಿನಿಯರಿಂಗ್ ಪ್ರೋಗ್ರಾಮ್ ನೀಡುವ ಇಂಜಿನಿಯರಿಂಗ್ ಸಂಸ್ಥೆಗಳನ್ನು ಸ್ಥಾಪಿಸಲು ಪ್ರತೀ ಪ್ರೋಗ್ರಾಮಿನ ಅವಧಿ ಹಾಗೂ ಅನುಮೋದಿತ ಪ್ರವೇಶಾತಿಯಂತೆ ಅವಶ್ಯವಿರುವ Built-Up Area ವನ್ನು ಲೆಕ್ಕಚಾರ ಮಾಡಿ ಅದರ ಆದಾರದ ಮೇಲೆ ಮತ್ತು ಸದರಿ ಪ್ರದೇಶದಲ್ಲಿ ನಿಗಧಿಯಾಗಿರುವ FSI/FAR ಮಾನದಂಡಗಳನ್ವಯ ಅವಶ್ಯವಿರುವಷ್ಟು ಜಮೀನನ್ನು ಒದಗಿಸಿಕೊಳ್ಳಬೇಕಾಗಿರುತ್ತದೆ. ಅಲ್ಲದೇ ಎಐಸಿಟಿಇ ನವದೆಹಲಿಯವರ 2022-23ನೇ ಸಾಲಿನ ಮಾರ್ಗಸೂಚಿಯನ್ವಯ ಭೋಧಕರು ಮತ್ತು ವಿದ್ಯಾರ್ಥಿಗಳ ಅನುಪಾತ 1:20 ಆಗಿದ್ದು, ಭೋಧಕ: ಭೋಧಕೇತರ: ಆಡಳಿತ ಸಿಬ್ಬಂದಿ ಹುದ್ದೆಗಳನ್ನು 1:1:0.78 ಅನುಪಾತದಂತೆ ಸೃಜಿಸಬೇಕಾಗಿರುತ್ತದೆ.<br><br>ಮುಂದುವರೆದು, ಪ್ರಸ್ತುತ ಚಾಲ್ತಿಯಲ್ಲಿರುವ ಎಐಸಿಟಿಇ ಮಾರ್ಗಸೂಚಿಯನ್ವಯ 2023-24 ನೇ ಸಾಲಿನಿಂದ ಇಂಜಿನಿಯರಿಂಗ್ ಕಾಲೇಜುಗಳಲ್ಲಿ 01 ಉದಯೋನ್ಮುಖ ಕೋರ್ಸ ಅನ್ನು ಒಳಗೊಂಡಂತೆ 04 ಕೋರ್ಸ್‌ಗಳೊಂದಿಗೆ ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸಬೇಕಾಗಿರುತ್ತದೆ. |
| ಆ) | ಶೈಕ್ಷಣಿಕವಾಗಿ ಮುಂದುವರೆಯುತ್ತಿರುವ ಸಿಂಧನೂರು ತಾಲ್ಲೂಕು ಇಂಜಿನಿಯರಿಂಗ್ ಕಾಲೇಜನ್ನು ಮಂಜೂರು ಮಾಡಲು ಪೂರೈಸದಿರುವ ಅಗತ್ಯ ಮಾನಡಂಡಗಳೇನು; | ಉನ್ನತ ಶಿಕ್ಷಣ ಇಲಾಖೆಗೆ ಆಯವ್ಯಯದಲ್ಲಿ ಒದಗಿಸುತ್ತಿರುವ ಅನುದಾನದಲ್ಲಿ ಅಭಿವೃದ್ಧಿಗಾಗಿ ಸೀಮಿತ ಅನುದಾನ ಲಭ್ಯವಿರುತ್ತದೆ. ಸದರಿ ಅನುದಾನದಲ್ಲಿ ಪ್ರಸ್ತುತ ಇರುವ ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಬಲವರ್ಧನೆಗೊಳಿಸಲಾಗುತ್ತಿದೆ. |
| ಇ) | ಯಾವ ಕಾಲಮಿತಿಯೊಳಗೆ ಸರ್ಕಾರದಿಂದ ಸಿಂಧನೂರು ತಾಲ್ಲೂಕಿನಲ್ಲಿ ಇಂಜಿನಿಯರಿಂಗ್ ಕಾಲೇಜನ್ನು ತೆರೆಯಲಾಗುವುದು? | ಸಿಂಧನೂರು ತಾಲ್ಲೂಕಿನಲ್ಲಿ ನೂತನ ಸರ್ಕಾರಿ ಇಂಜಿನಿಯರಿಂಗ್‌ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಪರಿಗಣನೆಯಲ್ಲಿ ಇರುವುದಿಲ್ಲ. |

ಕಡತ ಸಂಖ್ಯೆ: ಇಡಿ 23 ಹೆಚ್‌ಪಿಟಿ 2026)

(ಡಾ|| ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು